# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1012 (776) |
| ಸದಸ್ಯರ ಹೆಸರು | : | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 10.03.2021. |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿಗಳು<br>ಲೋಕೋಪಯೋಗಿ ಇಲಾಖೆ |

| .ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪುಣೆ – ಬೆಂಗಳೂರು ಹೆದ್ದಾರಿಯಲ್ಲಿ ಬರುವ ಟೋಲ್ ನಾಕಾಗಳ ಸಂಖ್ಯೆ ಎಷ್ಟು; ಈ ಟೋಲ್ ನಾಕಾಗಳನ್ನು ಎಷ್ಟು ವರ್ಷಗಳ ವರೆಗೆ ಗುತ್ತಿಗೆಗೆ ಕೊಡಲಾಗಿದೆ; | ಪುಣೆ – ಬೆಂಗಳೂರು ರಾಷ್ಟ್ರೀಯ ಹೆದ್ದಾರಿ –4 ರ ಮೇಲೆ ಒಟ್ಟು 18 ಟೋಲ್‌ಪ್ಲಾಜಾಗಳಿವೆ. ಇವುಗಳಲ್ಲಿ 12 ಟೋಲ್‌ಪ್ಲಾಜಾಗಳು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಯಲ್ಲಿದ್ದು, ಉಳಿದ 06 ರಾಷ್ಟ್ರೀಯ ಹೆದ್ದಾರಿ ವಲಯದ ವ್ಯಾಪ್ತಿಯಲ್ಲಿವೆ. ಈ ಟೋಲ್ ಪ್ಲಾಜಾಗಳಲ್ಲಿ ಶುಲ್ಕ ವಸೂಲಾತಿಗಾಗಿ ಗುತ್ತಿಗೆದಾರರೊಡನೆ ಮಾಡಿಕೊಂಡಿರುವ ಒಪ್ಪಂದದ ವಿವರಗಳನ್ನು ಅನುಬಂಧ–1 ಮತ್ತು 2 ರಲ್ಲಿ ನೀಡಲಾಗಿದೆ. |
| ಆ) | ಈ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಸರ್ವೀಸ್ ರಸ್ತೆಗಳನ್ನು ಯಾರು ನಿರ್ವಹಣೆ ಮಾಡುತ್ತಾರೆ; | ಈ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಸರ್ವೀಸ್ ರಸ್ತೆಗಳನ್ನು ಆಯಾಯಾ ಗುತ್ತಿಗೆದಾರರ ಮುಖಾಂತರ ನಿರ್ವಹಣೆ ಮಾಡುತ್ತಿರುವುದಾಗಿ ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಇ) | ಸದರಿ ಹೆದ್ದಾರಿಯ ಬಹಳಷ್ಟು ಕಡೆಗಳಲ್ಲಿ ಸರ್ವೀಸ್ ರಸ್ತೆಗಳು ತೀರಾ ಅಸ್ತವ್ಯಸ್ತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ರಸ್ತೆಗಳ ದುರಸ್ತಿಯ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು? | ಮುಖ್ಯ ಕಾಮಗಾರಿಯಲ್ಲಿ ಬರುವ ಕೆಳಸೇತುವೆ ಕಾಮಗಾರಿಗಳು ಪ್ರಗತಿಯಲ್ಲಿರುವ ಸ್ಥಳಗಳಲ್ಲಿ ಸಂಚಾರಕ್ಕೆ ತಾತ್ಕಾಲಿಕ ತಿರುವು ರಸ್ತೆಗಳನ್ನು ಹೊರತುಪಡಿಸಿ, ಉಳಿದಂತೆ ಈ ಹೆದ್ದಾರಿಯಲ್ಲಿ ಬರುವ ಸರ್ವೀಸ್ ರಸ್ತೆಗಳು ಸಂಚಾರಕ್ಕೆ ಯೋಗ್ಯವಾಗಿವೆ. ಹಾಳಾಗಿರುವ ಸರ್ವೀಸ್ ರಸ್ತೆಗಳನ್ನು, ಆಯಾಯಾ ಗುತ್ತಿಗೆದಾರರು ದುರಸ್ತಿಪಡಿಸುತ್ತಿದ್ದಾರೆ ಎಂದು ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |

ಕಡತ ಸಂಖ್ಯೆ: ಲೋಇ 80 ಸಿಎನ್‌ಹೆಚ್ 2021 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿ,
ಲೋಕೋಪಯೋಗಿ ಇಲಾಖೆ